





ದಿನಾಂಕ:19-06-24 ರಂದು ಕರ್ನಾಟಕ ಸರ್ಕಾರ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವುಗಳ ವ್ಯಾಪ್ತಿಯಲ್ಲಿ ಬರುವ ಪಿ.ಯು.ಸಿ ಹಾಗೂ ಎಸ್. ಎಸ್. ಎಲ್. ಸಿ ವಿದ್ಯಾರ್ಥಿಗಳು 2024ನೇ ಸಾಲಿನ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ಪದವಿಪೂರ್ವ ಹಾಗೂ ಪ್ರೌಢ ಶಾಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಮಾನ್ಯ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಸಿದ್ಧರಾಮಯ್ಯನವರು ಸಭಾಪತಿಗಳಾದ ಬಸವರಾಜ್ ಹೊರಟ್ಟಿ ಅವರು ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ. ಎಚ್. ಸಿ ಮಹದೇವಪ್ಪ ಇವರುಗಳ ಸಮ್ಮುಖದಲ್ಲಿ ಸಾಧಕರನ್ನ ಸನ್ಮಾನಿಸಲಾಯಿತು. ವೇದಿಕೆ ಮೇಲೆ ಶಾಸಕರು , ವಿಧಾನ ಪರಿಷತ್ ಸದಸ್ಯರು ಇಲಾಖೆಯ ಹಿರಿಯ ಅಧಿಕಾರಿಗಳು ಗಣ್ಯಮಾನ್ಯರು ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.